## ಕರ್ನಾಟಕ ಸರ್ಕಾರದ ನಡವಳಿಗಳು
## ಜಲ ಸಂಪನ್ಮೂಲ ಇಲಾಖೆ

ವಿಷಯ:- ರಾಯಚೂರು ಜಿಲ್ಲೆ ಮಸ್ಕಿ ತಾಲ್ಲೂಕಿನ ಮಸ್ಕಿನಾಲಾ ಯೋಜನೆಯ ಬಲದಂಡೆ ಮತ್ತು ಎಡದಂಡೆ ಮುಖ್ಯ ಕಾಲುವೆಗಳ ಹಾಗೂ ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿಗಳಿಗೆ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.52.54 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿನಿ/ ಮಸ್ಕಿನಾಲಾ ಆಧುನೀಕರಣ/ 02/ 2019/ 4899, ದಿನಾಂಕ:12.12.2019.

---***---

**<u>ಪ್ರಸ್ತಾವನೆ:</u>**

ರಾಯಚೂರು ಜಿಲ್ಲೆಯಲ್ಲಿ ಬರುವ ಮಸ್ಕಿನಾಲಾ ಯೋಜನೆಯ ಕಾಲುವೆಗಳು 2006 ರಲ್ಲಿ ನಿರ್ಮಾಣಗೊಂಡಿದ್ದು. ಬಲದಂಡೆ ಮುಖ್ಯ ಕಾಲುವೆ 11.50 ಕಿ.ಮೀ ಉದ್ದ ಹಾಗೂ ಎಡದಂಡೆ ಮುಖ್ಯ ಕಾಲುವೆ 10.00 ಕಿ.ಮೀ ಇದ್ದು, ಸುಮಾರು 7416 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಕಲ್ಪಿಸಲಾಗುತಿತ್ತು. ಸದರಿ ಮುಖ್ಯ ಕಾಲುವೆಗಳು ಹಾಗೂ ಉಪ ಕಾಲುವೆಗಳು ಸುಮಾರು 20 ವರ್ಷಗಳ ಹಿಂದಿನದಾಗಿದ್ದು, ಶಿಥಿಲಾವಸ್ಥೆಯಿಂದ ಹಲವು ಕಡೆ ನೀರು ಪೋಲಾಗುತ್ತಿತ್ತು. ಇದರಿಂದ ಕೊನೆ ಭಾಗದ ಸುಮಾರು 404 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ಸಮರ್ಪಕವಾಗಿ ನೀರು ಪೂರೈಸಲು ಸಾಧ್ಯವಾಗದೆ ಬಾಧಿತವಾಗಿರುತ್ತದೆ. ಬಾಧಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಪೂರೈಸಲು ಸದರಿ ಆಧುನೀಕರಣ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಮೇಲೆ ಓದಲಾದ (1) ರ ಪತ್ರದಲ್ಲಿ ವರದಿಸಿರುತ್ತಾರೆ.

ಮುಂದುವರೆದು, ರಾಯಚೂರು ಜಿಲ್ಲೆ ಮಸ್ಕಿ ತಾಲ್ಲೂಕಿನ ಮಸ್ಕಿನಾಲಾ ಯೋಜನೆಯ ಬಲದಂಡೆ ಮತ್ತು ಎಡದಂಡೆ ಮುಖ್ಯ ಕಾಲುವೆಗಳ ಹಾಗೂ ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿಗಳಿಗೆ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.52.54 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:18.11.2019 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 65ನೇ ಸಭೆಯಲ್ಲಿ ಮಂಡಿಸಲಾಗಿ, ಸದರಿ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ದಿನಾಂಕ:04.12.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 92ನೇ ಸಭೆಯಲ್ಲಿ ಮಂಡಿಸಲಾಗಿ, ಸದರಿ ಯೋಜನೆಯ ರೂ.52.54 ಕೋಟಿಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮಂಡಳಿಯು ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ತಿಳಿಸಿರುತ್ತಾರೆ.

...2

ಈ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಜಸಂಇ 84 ಎಂಟಿಪಿ 2019, ಬೆಂಗಳೂರು, ದಿನಾಂಕ:13.11.2020</u>**

ರಾಯಚೂರು ಜಿಲ್ಲೆ ಮಸ್ಕಿ ತಾಲ್ಲೂಕಿನ ಮಸ್ಕಿನಾಲಾ ಯೋಜನೆಯ ಬಲದಂಡೆ ಮತ್ತು ಎಡದಂಡೆ ಮುಖ್ಯ ಕಾಲುವೆಗಳ ಹಾಗೂ ವಿತರಣಾ ಕಾಲುವೆಗಳ ಆಧುನೀಕರಣ ಕಾಮಗಾರಿಗಳಿಗೆ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.52.54 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 1 ಆಕೋ-1/2020 (ಇ-ಆಫೀಸ್) ದಿನಾಂಕ:12.11.2020 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

13/11/20

**(ಶ್ರೀಹರಿ ಎಸ್.ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿಗಳು (ಸಚಿವ ಸಂಪುಟ).
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.